ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ. ಎಫ್. ಸಿ.ರವರ ನ್ಯಾಯಾಲಯ,
ಮಡಿಕೇರಿ.

**ಸಿ.ಸಿ.ನಂಃ 184/2026**

ಪಿಡಬ್ಲ್ಯುಃ – 3

ಸಿಡಬ್ಲ್ಯುಃ – 3

ದಿನಾಂಕಃ 16.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು | – ನಯನಾ ಸಿ |
| ತಂದೆಯ ಹೆಸರು | – ಚಿನ್ನಾದೊರೆ |
| ವಯಸ್ಸು | – ವರ್ಷ |
| ವೃತ್ತಿ | – |
| ವಾಸಸ್ಥಳ | – ಕೂಡ್ಲೂರು ಚೆಟ್ಟಳ್ಳಿ |

ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ-

ಚಾಸಾ-1 ನನ್ನ ತಾಯಿ. ಚಾಸಾ-2 ನನ್ನ ತಂದೆ. ಚಾಸಾ-4 ನನ್ನ ತಾತ. ಚಾಸಾ-5 ಮತ್ತು 6 ನನ್ನ ಅತ್ತೆಯಂದಿರು. ಚಾಸಾ-7 ಮತ್ತು 8 ನನಗೆ ಗೊತ್ತು. ಆರೋಪಿ ನನ್ನ ಅತ್ತೆ ಮಗ.

ಆರೋಪಿ ಮತ್ತು ನಮ್ಮ ನಡುವೆ ಯಾವುದೇ ಗಲಾಟೆ ಆಗಿಲ್ಲ, ಆರೋಪಿ ನನಗೆ ಮತ್ತು ಚಾಸಾ-1, 2 ರವರ ಮೇಲೆ ಯಾವುದೇ ಹಲ್ಲೆ ಮಾಡಿಲ್ಲ, ನಮಗೆ ಕೊಲೆ ಬೆದರಿಕೆ ಹಾಕಿಲ್ಲ, ನಮಗೆ ಅವಾಚ್ಯ ಶಬ್ಧಗಳಿಂದ ಬೈದಿಲ್ಲ ಮತ್ತು ನಮ್ಮ ಮನೆಗೆ ಅತಿಕ್ರಮ ಪ್ರವೇಶ ಮಾಡಿಲ್ಲ. ಚಾಸಾ-1 ಪೊಲೀಸರಿಗೆ ಯಾವುದೇ ದೂರು ನೀಡಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸರಕಾರಿ ಅಭಿಯೋಜಕರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ನೀಡಲಾಯಿತು)**

<u>ಪಾಟೀ ಸವಾಲು ಮಾನ್ಯ ಸರಕಾರಿ ಅಭಿಯೋಜಕರಿಂದಃ–</u>

ದಿಃ 23.09.2025 ರಂದು ಆರೋಪಿ ಮಧ್ಯಪಾನ ಮಾಡಿಕೊಂಡು ಸಂಜೆ ಸುಮಾರು 6.00 ಗಂಟೆಗೆ ನಮ್ಮ ಮನೆಯ ಒಳಗೆ ಅತಿಕ್ರಮ ಪ್ರವೇಶ ಮಾಡಿ ವಿನಾ ಕಾರಣ ಜಗಳ ತೆಗೆದು, ನಮಗೆ ಅವಾಚ್ಯ ಶಬ್ಧಗಳಿಂದ ಬೈದರು ಎಂದರೆ ಸರಿಯಲ್ಲ. ನನಗೆ ಆರೋಪಿಯು ಅವನ ಕೈಯಿಂದ ನನ್ನ ಬೆನ್ನಿಗೆ ಹೊಡೆದು ನೋವು ಉಂಟು ಮಾಡಿರುತ್ತಾನೆ ಎಂದರೆ ಸರಿಯಲ್ಲ. ಜಗಳ ಬಿಡಿಸಲು ನಾನು ಮತ್ತು ಚಾಸಾ–4 ರವರು ಹೋಗಿದ್ದು, ಆಗ ಆರೋಪಿ ನನ್ನ ಹೊಟ್ಟೆಗೆ ಕೈಯಿಂದ ಹೊಡೆದು, ಕಾಲಿನಿಂದ ಒದ್ದು ಕೆಳಗೆ ಬೀಳಿಸಿ ನೋವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟರಲ್ಲಿ ಚಾಸಾ–5 ಮತ್ತು 6 ರವರು ಸಮಾಧಾನ ಮಾಡಿದರು ಎಂದರೆ ಸರಿಯಲ್ಲ. ಆರೋಪಿಯು ನಿಮ್ಮನ್ನು ಈ ಸಲ ಬಿಟ್ಟಿದ್ದೀನಿ ಮುಂದೆ ನಿಮ್ಮನ್ನು ಸಾಯಿಸುತ್ತೇನೆ ಎಂದು ನಮಗೆ ಪ್ರಾಣ ಬೆದರಿಕೆ ಹಾಕಿ ಹೋದನು ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ–2 ರವರು ಮಡಿಕೇರಿಯ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇವೆ ಎಂದರೆ ಸರಿಯಲ್ಲ.

ದಿಃ 30.09.2025 ರಂದು ನಾನು ಪೊಲೀಸರ ಮುಂದೆ ಮೇಲೆ ಓದಿ ಹೇಳಲಾದಂತೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ–5 ಎಂದು ಗುರುತಿಸಲಾಯಿತು. ನಿಪಿ–5 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ಆರೋಪಿ ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ರಾಜಿ ಮಾಡಿಕೊಂಡಿರುವ ಕಾರಣ ಆರೋಪಿ ಪರ ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ

<u>ಪಾಟೀ ಸವಾಲುಃ – ಆರೋಪಿ ಪರ ವಕೀಲರಿಂದ ಏನು ಇಲ್ಲ.</u>

ಮರು ವಿಚಾರಣೆಃ – ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/–

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ. ಎಂ. ಎಫ್. ಸಿ, ಮಡಿಕೇರಿ.